# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 1649* |
| ಸದಸ್ಯರ ಹೆಸರು | ಶ್ರೀ ಸಿ.ಎನ್. ಮಂಜೇಗೌಡ |
| ಉತ್ತರಿಸುವ ದಿನಾಂಕ | 18.03.2026 |
| ಉತ್ತರಿಸುವವರು | ಸಾರಿಗೆ ಮತ್ತು ಧಾರ್ಮಿಕ ದತ್ತಿ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯ ಮುಜರಾಯಿ ಇಲಾಖೆಯು ಕಾಶಿ ಯಾತ್ರೆ ಮಾದರಿಯಲ್ಲಿ ಜಮ್ಮು-ಕಾಶ್ಮೀರದ 'ವೈಷ್ಣೋದೇವಿ' ಯಾತ್ರೆಗೂ ಸಹಾಯಧನ ನೀಡಲು ಚಿಂತನೆ ನಡೆಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕರ್ನಾಟಕ ರಾಜ್ಯದಿಂದ ಕೈಲಾಸ ಮಾನಸ ಸರೋವರ ಯಾತ್ರೆ ಕೈಗೊಂಡ ಯಾತ್ರಾರ್ಥಿಗಳಿಗೆ ತಲಾ ರೂ.30,000/- ಹಾಗೂ ಚಾರ್‌ಧಾಮ್ ಯಾತ್ರೆ ಕೈಗೊಂಡ ಯಾತ್ರಾರ್ಥಿಗಳಿಗೆ ತಲಾ ರೂ.20,000/- ಹಾಗೂ ಕಾಶಿ ಯಾತ್ರೆ ಕೈಗೊಂಡ ಯಾತ್ರಾರ್ಥಿಗಳಿಗೆ ತಲಾ ರೂ.5,000/- ಸಹಾಯಧನವನ್ನು ಸರ್ಕಾರದಿಂದ ನೀಡಲಾಗುತ್ತಿದೆ.<br><br>ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ:13.11.2024 ರಂದು ನಡೆದ ರಾಜ್ಯ ಧಾರ್ಮಿಕ ಪರಿಷತ್ತಿನ ಸಭೆಯಲ್ಲಿ ಕರ್ನಾಟಕ ರಾಜ್ಯದಿಂದ "ಶ್ರೀ ಮಾತಾ ವೈಷ್ಣೋದೇವಿ" ದೇವಾಲಯಕ್ಕೆ ಭೇಟಿ ನೀಡುವ ಯಾತ್ರಾರ್ಥಿಗಳಿಗೆ ತಲಾ ರೂ.5,000/-ಗಳ ಸಹಾಯಧನವನ್ನು ವಿತರಿಸುವ ಯೋಜನೆಯನ್ನು ಜಾರಿಗೆ ತರಲು ತೀರ್ಮಾನಿಸಲಾಗಿರುತ್ತದೆ.<br><br>ಮುಂದುವರೆದು, 2026-27ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-441ರಲ್ಲಿ ಈ ಕೆಳಕಂಡಂತೆ ಘೋಷಣೆಯಾಗಿರುತ್ತದೆ:<br><br>**"ಕರ್ನಾಟಕ ರಾಜ್ಯದಿಂದ "ಶ್ರೀ ಮಾತಾ ವೈಷ್ಣೋದೇವಿ" ದೇವಾಲಯಕ್ಕೆ ಯಾತ್ರೆ ಕೈಗೊಳ್ಳುವ ಯಾತ್ರಾರ್ಥಿಗಳಿಗೆ ಸರ್ಕಾರದಿಂದ ತಲಾ 5,000 ರೂ.ಗಳ ಸಹಾಯಧನವನ್ನು ಡಿ.ಬಿ.ಟಿ ಮೂಲಕ ವಿತರಿಸಲು ಉದ್ದೇಶಿಸಲಾಗಿದೆ. ಈ ಉದ್ದೇಶಕ್ಕೆ ಐದು ಕೋಟಿ ರೂ. ಅನುದಾನ ಮೀಸಲಿರಿಸಿದೆ."**<br><br>ಅದರಂತೆ, ಉದ್ದೇಶಿತ "ಶ್ರೀ ಮಾತಾ ವೈಷ್ಣೋದೇವಿ" ಯಾತ್ರೆ ಯೋಜನೆಯನ್ನು 2026-27ನೇ ಸಾಲಿನಿಂದ ಅನುಷ್ಠಾನಗೊಳಿಸಿ, ಶ್ರೀ ವೈಷ್ಣೋದೇವಿ ಯಾತ್ರೆಯನ್ನು ಕೈಗೊಳ್ಳುವ ಯಾತ್ರಾರ್ಥಿಗಳಿಗೆ ಸಹಾಯಧನ ಪಾವತಿಸಲು ಕ್ರಮ ಕೈಗೊಳ್ಳಲಾಗುತ್ತದೆ.<br><br>ಉದ್ದೇಶಿತ **"ಶ್ರೀ ಮಾತಾ ವೈಷ್ಣೋದೇವಿ" ದೇವಾಲಯಕ್ಕೆ ಯಾತ್ರೆ** ಕೈಗೊಳ್ಳುವ ಯೋಜನೆಯ ಅನುಷ್ಠಾನಕ್ಕಾಗಿ ಅಗತ್ಯವಿರುವ ಅನುದಾನ ಬಿಡುಗಡೆ |
| ಆ) | ಬಂದಿದ್ದಲ್ಲಿ, ಈ ಯಾತ್ರೆಗೆ ತಲಾ ಎಷ್ಟು ರೂಪಾಯಿಗಳ ಸಹಾಯಧನ ನೀಡಲು ಉದ್ದೇಶಿಸಲಾಗಿದೆ ಮತ್ತು ಈ ಯೋಜನೆಗೆ ಇಲಾಖೆಯು ರೂಪಿಸಿರುವ ಮಾರ್ಗಸೂಚಿಗಳೇನು;(ವಿವರ ನೀಡುವುದು); | |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| | | ಹಾಗೂ ಯಾತ್ರಾರ್ಥಿಗಳಿಗೆ ಸಹಾಯಧನ ಪಾವತಿಸುವ ಕುರಿತಂತೆ ಮಾರ್ಗಸೂಚಿಯನ್ನು ಹೊರಡಿಸುವ ಕುರಿತ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ.<br><br>**ಕರ್ನಾಟಕ ರಾಜ್ಯದಿಂದ ಪುಣ್ಯಕ್ಷೇತ್ರಗಳಿಗೆ ಪ್ರವಾಸ ಕೈಗೊಳ್ಳಲು ಅನುಕೂಲವಾಗುವಂತೆ ರಿಯಾಯಿತಿ ದರದಲ್ಲಿ ಈ ಕೆಳಕಂಡ ಪ್ಯಾಕೇಜುಗಳನ್ನು ರೂಪಿಸಿ ಅನುಷ್ಠಾನಗೊಳಿಸಲಾಗಿರುತ್ತದೆ:**<br><br>2023-24ನೇ ಸಾಲಿನಿಂದ ಜಾರಿಗೆ ಬರುವಂತೆ ಕರ್ನಾಟಕ ರಾಜ್ಯದಿಂದ ಪುಣ್ಯ ಕ್ಷೇತ್ರಗಳಿಗೆ ಕಡಿಮೆ ವೆಚ್ಚದಲ್ಲಿ ತೆರಳಲು ಅನುಕೂಲವಾಗುವಂತೆ ರಿಯಾಯ್ತಿ ದರದಲ್ಲಿ ಪ್ಯಾಕೇಜ್ ರೂಪಿಸಿದ್ದು, "ಕರ್ನಾಟಕ ಭಾರತ್ ಗೌರವ್ ಯೋಜನೆಯನ್ನು IRCTC ಮತ್ತು ಭಾರತೀಯ ರೈಲ್ವೇ ಇಲಾಖೆಯ ಸಹಯೋಗದೊಂದಿಗೆ ಧಾರ್ಮಿಕ ದತ್ತಿ ಇಲಾಖೆಯ ವತಿಯಿಂದ ವಿಶೇಷ ರೈಲಿನ ಮೂಲಕ ಪ್ರವಾಸವನ್ನು ಕೈಗೊಳ್ಳಲಾಗುತ್ತಿದೆ. ಈ ವಿಶೇಷ ರೈಲಿನಲ್ಲಿ ತೆರಳುವ ಯಾತ್ರಾರ್ಥಿಗಳಿಗೆ, ಉಪಹಾರ, ಊಟ, ತಂಗುವಿಕೆ, ಸ್ಥಳೀಯ ಸಾರಿಗೆ, ಸಾಮಾನ್ಯ ಔಷಧಿ ವೆಚ್ಚ ಮತ್ತು ಸ್ಥಳೀಯ ವೀಕ್ಷಣೆ ಒಳಗೊಂಡಿರುತ್ತದೆ.<br><br>"ಕರ್ನಾಟಕ ಭಾರತ್ ಗೌರವ್ ಕಾಶಿ-ಗಯಾ ದರ್ಶನ" ಯೋಜನೆಯಡಿ ವಾರಣಾಸಿ, ಅಯೋಧ್ಯೆ ಪ್ರಯಾಗ್ ರಾಜ್ ಮತ್ತು ಗಯಾ ಕ್ಷೇತ್ರಗಳಿಗೆ ಪ್ರಯಾಣಿಸುವ ಯಾತ್ರಾರ್ಥಿಗಳಿಗೆ ತಲಾ ರೂ.32,500/- ಗಳಂತೆ ಪ್ಯಾಕೇಜ್ ರೂಪಿಸಿದ್ದು, ಈ ಮೊತ್ತದಲ್ಲಿ ಯಾತ್ರಾರ್ಥಿಗಳಿಗೆ ಒದಗಿಸುವ ಸೌಲಭ್ಯಗಳ ವೆಚ್ಚಗಳನ್ನೊಳಗೊಂಡಂತೆ ತಲಾ ರೂ.17,500/- ಗಳನ್ನು ರಾಜ್ಯ ಸರ್ಕಾರದ ವತಿಯಿಂದ ಭರಿಸಿ, ಉಳಿದ ಮೊತ್ತ ರೂ.15000/-ಗಳನ್ನು ಯಾತ್ರಾರ್ಥಿಗಳು ಪಾವತಿಸಬೇಕಾಗಿರುತ್ತದೆ.<br><br>"ಕರ್ನಾಟಕ ಭಾರತ್ ಗೌರವ್ ದಕ್ಷಿಣ ಯಾತ್ರೆ" ಯೋಜನೆಯಡಿ ಯಾತ್ರಾ ಸ್ಥಳಗಳಾದ ರಾಮೇಶ್ವರ, ಕನ್ಯಕುಮಾರಿ, ಮಧುರೈ ಮತ್ತು ತಿರುವನಂತಪುರಂ ಕ್ಷೇತ್ರಗಳಿಗೆ ರೈಲ್ವೆ ಇಲಾಖೆಯ ಸಹಯೋಗದೊಂದಿಗೆ ಧಾರ್ಮಿಕ ದತ್ತಿ ಇಲಾಖೆ ವತಿಯಿಂದ ಯಾತ್ರೆಯನ್ನು ಆಯೋಜಿಸಲಾಗಿದೆ. ಈ ಯೋಜನೆಯಡಿ ಪ್ರಯಾಣಿಸುವ ಯಾತ್ರಾರ್ಥಿಗಳಿಗೆ ತಲಾ ರೂ.25,000/- ಗಳಂತೆ ಪ್ಯಾಕೇಜ್ ರೂಪಿಸಿದ್ದು, ಈ ಮೊತ್ತದಲ್ಲಿ ಯಾತ್ರಾರ್ಥಿಗಳಿಗೆ ಒದಗಿಸುವ ಸೌಲಭ್ಯಗಳ ವೆಚ್ಚಗಳನ್ನೊಳಗೊಂಡಂತೆ ತಲಾ ರೂ.15,000/-ಗಳನ್ನು ರಾಜ್ಯ ಸರ್ಕಾರದ ವತಿಯಿಂದ ಭರಿಸಿ ಉಳಿದ ಮೊತ್ತ ರೂ.10,000/-ಗಳನ್ನು ಯಾತ್ರಾರ್ಥಿಗಳು ಪಾವತಿಸಬೇಕಾಗಿರುತ್ತದೆ. |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td></td><td></td><td>“ಭಾರತ್ ಗೌರವ್ ದ್ವಾರಕ ಯಾತ್ರಾಯೋಜನೆಯಡಿ ದ್ವಾರಕಾ, ನಾಗೇಶ್ವರ, ಸೋಮನಾಥ್, ತ್ರಯಂಬಕೇಶ್ವರ ಕ್ಷೇತ್ರಗಳಿಗೆ ರೈಲ್ವೆ ಇಲಾಖೆಯ ಸಹಯೋಗದೊಂದಿಗೆ ಧಾರ್ಮಿಕ ದತ್ತಿ ಇಲಾಖೆ ವತಿಯಿಂದ 8 ದಿನಗಳ ಯಾತ್ರೆಯನ್ನು ಆಯೋಜಿಸಲಾಗಿದೆ. ಈ ಯೋಜನೆಯಡಿ ಪ್ರಯಾಣಿಸುವ ಯಾತ್ರಾರ್ಥಿಗಳಿಗೆ ತಲಾ ರೂ.32,500/- ಗಳಂತೆ ಪ್ಯಾಕೇಜ್ ರೂಪಿಸಿದ್ದು, ಈ ಮೊತ್ತದಲ್ಲಿ ಯಾತ್ರಾರ್ಥಿಗಳಿಗೆ ಒದಗಿಸುವ ಸೌಲಭ್ಯಗಳ ವೆಚ್ಚಗಳನ್ನೊಳಗೊಂಡಂತೆ ತಲಾ ರೂ.17,500/- ಗಳನ್ನು ರಾಜ್ಯ ಸರ್ಕಾರದ ವತಿಯಿಂದ ಭರಿಸಿ ಉಳಿದ ಮೊತ್ತ ರೂ.15,000/-ಗಳನ್ನು ಯಾತ್ರಾರ್ಥಿಗಳು ಪಾವತಿಸಬೇಕಾಗಿರುತ್ತದೆ.<br><br>ಭಾರತ್ ಗೌರವ್ ಪೂರಿ ಜಗನ್ನಾಥ ದರ್ಶನ ಯಾತ್ರೆ ಯೋಜನೆಯಡಿ ಪುರಿ, ಕೊನಾರ್ಕ್ ಗಂಗಾ ಸಾಗರ್, ಕೊಲ್ಕತ್ತಾ ಕ್ಷೇತ್ರಗಳಿಗೆ ರೈಲ್ವೆ ಇಲಾಖೆಯ ಸಹಯೋಗದೊಂದಿಗೆ ಧಾರ್ಮಿಕ ದತ್ತಿ ಇಲಾಖೆ ವತಿಯಿಂದ 8 ದಿನಗಳ ಯಾತ್ರೆಯನ್ನು ಆಯೋಜಿಸಲಾಗಿದೆ. ಈ ಯೋಜನೆಯಡಿ ಪ್ರಯಾಣಿಸುವ ಯಾತ್ರಾರ್ಥಿಗಳಿಗೆ ತಲಾ ರೂ.32,500/- ಗಳಂತೆ ಪ್ಯಾಕೇಜ್ ರೂಪಿಸಿದ್ದು, ಈ ಯೋಜನೆಯಡಿ ಪ್ರಯಾಣಿಸುವ ಯಾತ್ರಾರ್ಥಿಗಳಿಗೆ ಒದಗಿಸುವ ಸೌಲಭ್ಯಗಳ ವೆಚ್ಚಗಳನ್ನೊಳಗೊಂಡಂತೆ ತಲಾ ರೂ.17,500/- ಗಳನ್ನು ರಾಜ್ಯ ಸರ್ಕಾರದ ವತಿಯಿಂದ ಭರಿಸಿ ಉಳಿದ ಮೊತ್ತ ರೂ. 15,000/-ಗಳನ್ನು ಯಾತ್ರಾರ್ಥಿಗಳು ಪಾವತಿಸಬೇಕಾಗಿರುತ್ತದೆ.</td></tr>
<tr><td>ಇ)</td><td>ಈಗಾಗಲೇ ಕಾಶಿ, ಚಾರ್‌ಧಾಮ್ ಮತ್ತು ಮಾನಸ ಸರೋವರ ಯಾತ್ರೆಗಳಿಗೆ ನೀಡಲಾಗುತ್ತಿರುವ ಸಹಾಯಧನದ ಮೊತ್ತ ಎಷ್ಟು ಹಾಗೂ ಕಳೆದ ವರ್ಷ (2025ರಲ್ಲಿ) ಈ ಯೋಜನೆಗಳಡಿ ಎಷ್ಟು ಫಲಾನುಭವಿಗಳು ಪ್ರಯೋಜನ ಪಡೆದಿದ್ದಾರೆ;</td><td>ಕರ್ನಾಟಕ ರಾಜ್ಯದಿಂದ ಈಗಾಗಲೇ ಕಾಶಿ, ಚಾರ್‌ಧಾಮ್ ಮತ್ತು ಮಾನಸ ಸರೋವರ ಯಾತ್ರೆ ಕೈಗೊಂಡ ಯಾತ್ರಾರ್ಥಿಗಳಿಗೆ ನೀಡಲಾಗುತ್ತಿರುವ ಸಹಾಯಧನದ ಮೊತ್ತದ ವಿವರ ಹಾಗೂ ಫಲಾನುಭವಿಗಳ ಸಂಖ್ಯೆ ವಿವರ ಈ ಕೆಳಕಂಡಂತಿದೆ.
<table>
<tr><th>ಕ್ರ ಸಂ</th><th>ಯೋಜನೆಗಳ ವಿವರ</th><th>ಸರ್ಕಾರದ ಸಹಾಯಧನದ ಮೊತ್ತ (ರೂ.ಗಳಲ್ಲಿ)</th><th>2025-26ನೇ ಸಾಲಿನಲ್ಲಿ ಸರ್ಕಾರದ ಸಹಾಯಧನ ಪಡೆದ ಫಲಾನುಭವಿಗಳ ವಿವರ</th></tr>
<tr><td>1</td><td>ಕೈಲಾಸ ಮಾನಸ ಸರೋವರ</td><td>30,000/-</td><td>555</td></tr>
<tr><td>2</td><td>ಚಾರ್ ಧಾಮ್</td><td>20,000/-</td><td>2553</td></tr>
<tr><td>3</td><td>ಕಾಶಿ</td><td>5,000/-</td><td>3619</td></tr>
<tr><td></td><td></td><td>ಒಟ್ಟು</td><td>6727</td></tr>
</table></td></tr>
</table>

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಈ) | ವೈಷ್ಣೋದೇವಿ ಯಾತ್ರಾರ್ಥಿಗಳಿಗೆ ರೈಲ್ವೆ ಇಲಾಖೆಯ ಸಹಯೋಗದೊಂದಿಗೆ ರಿಯಾಯಿತಿ ದರದ ಟಿಕೆಟ್ ಅಥವಾ ವಿಶೇಷ ಸೌಲಭ್ಯ ಒದಗಿಸುವ ಕುರಿತು ಸರ್ಕಾರವು ಕೈಗೊಂಡಿರುವ ಕ್ರಮಗಳೇನು; | 2026-27ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-441ರಲ್ಲಿ ಈ ಕೆಳಕಂಡಂತೆ ಘೋಷಣೆಯಾಗಿರುತ್ತದೆ:<br><br>**"ಕರ್ನಾಟಕ ರಾಜ್ಯದಿಂದ "ಶ್ರೀ ಮಾತಾ ವೈಷ್ಣೋದೇವಿ" ದೇವಾಲಯಕ್ಕೆ ಯಾತ್ರೆ ಕೈಗೊಳ್ಳುವ ಯಾತ್ರಾರ್ಥಿಗಳಿಗೆ ಸರ್ಕಾರದಿಂದ ತಲಾ 5,000 ರೂ.ಗಳ ಸಹಾಯಧನವನ್ನು ಡಿ.ಬಿ.ಟಿ ಮೂಲಕ ವಿತರಿಸಲು ಉದ್ದೇಶಿಸಲಾಗಿದೆ. ಈ ಉದ್ದೇಶಕ್ಕೆ ಐದು ಕೋಟಿ ರೂ. ಅನುದಾನ ಮೀಸಲಿರಿಸಿದೆ."**<br><br>ಅದರಂತೆ, ಉದ್ದೇಶಿತ "ಶ್ರೀ ಮಾತಾ ವೈಷ್ಣೋದೇವಿ" ಯಾತ್ರೆ ಯೋಜನೆಯನ್ನು 2026-27ನೇ ಸಾಲಿನಿಂದ ಅನುಷ್ಠಾನಗೊಳಿಸಿ, ಶ್ರೀ ವೈಷ್ಣೋದೇವಿ ಯಾತ್ರೆಯನ್ನು ಕೈಗೊಳ್ಳುವ ಯಾತ್ರಾರ್ಥಿಗಳಿಗೆ ಸಹಾಯಧನ ಪಾವತಿಸಲು ಕ್ರಮ ಕೈಗೊಳ್ಳಲಾಗುತ್ತದೆ. |
| ಉ) | ಈ ಯೋಜನೆಯನ್ನು ಯಾವಾಗಿನಿಂದ ಜಾರಿಗೆ ತರಲು ಸರ್ಕಾರ ನಿರ್ಧರಿಸಿದೆ ಮತ್ತು ಇದಕ್ಕಾಗಿ ಕಾಯ್ದಿರಿಸಲಾದ ಅಂದಾಜು ಅನುದಾನವೆಷ್ಟು? | |

ಸಂಖ್ಯೆ: ಕಂಇ 56 ಮುಸಪ್ರ 2026

(ರಾಮಲಿಂಗಾರೆಡ್ಡಿ)
ಸಾರಿಗೆ ಮತ್ತು ಧಾರ್ಮಿಕ ದತ್ತಿ ಸಚಿವರು